ಬೆಂಗಳೂರಿನ ಕರಗ ಮಹೋತ್ಸವ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಕಾರ್ಯಕ್ರಮ

1761 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರಿನಲ್ಲಿ ಪ್ರತಿ ವರ್ಷ ನಡೆಯುವ ಕರಗ ಮಹೋತ್ಸವದ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆ ಕರಗ ಉತ್ಸವ ಹಾಗೂ ಇತರ ಪ್ರವಾಸೋದ್ಯಮ ಕಾರ್ಯಕ್ರಮಗಳನ್ನು ಆಚರಿಸುತ್ತಿದೆಯೆ?*

ಆ) *ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿದ್ದ ಕ್ರಮಗಳಾವುವು?*

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಅಧಿಕಾರಿಗಳಿಗೆ ಪ್ರೋತ್ಸಾಹಕರ ಬಹುಮಾನ ನೀಡುತ್ತಿರುವುದು.

1762 -ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಣ್ಣ ಉಳಿತಾಯ ಯೋಜನೆಯಡಿಯಲ್ಲಿ ಸರ್ಕಾರಿ ಇಲಾಖೆಗಳಾದ ಸಾರಿಗೆ, ಕಂದಾಯ ಹಾಗೂ ನಗರಪಾಲಿಕೆ ಇತ್ಯಾದಿಗಳಲ್ಲಿ ಕೆಲಸ ಮಾಡುತ್ತಿರುವ ಅಧಿಕಾರಿಗಳು, ನೌಕರರುಗಳಿಗೆ ಪ್ರೋತ್ಸಾಹಕರ ಬಹುಮಾನಗಳನ್ನು ನೀಡಲಾಗುತ್ತಿದೆಯೇ?*

ಆ) *ಹಾಗಿದ್ದಲ್ಲಿ, 1997-98ನೇ ಸಾಲಿನಲ್ಲಿ ಎಷ್ಟು ಅಧಿಕಾರಿಗಳಿಗೆ ಹಾಗೂ ನೌಕರರುಗಳಿಗೆ ಈ ಬಹುಮಾನಗಳನ್ನು ನೀಡಲಾಗಿದೆ?*

ಇ) *ಈ ಪ್ರೋತ್ಸಾಹಕ ಬಹುಮಾನಗಳ ಆಸೆಯಿಂದ ಸರ್ಕಾರಿ ಇಲಾಖೆಗಳಲ್ಲಿ ಸಣ್ಣ ಉಳಿತಾಯ ಸರ್ಟಿಫಿಕೇಟುಗಳನ್ನು ಕಡ್ಡಾಯವಾಗಿ ಖರೀದಿಸಬೇಕೆಂದು ಅಧಿಕಾರಿಗಳು ಸಾರ್ವಜನಿಕರಿಗೆ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಈ ರೀತಿ ಇವುಗಳನ್ನು ಖರೀದಿಸುವುದನ್ನು ಕಡ್ಡಾಯಗೊಳಿಸದೇ ಇರಲು ಸರ್ಕಾರ ಅಧಿಕಾರಿಗಳಿಗೆ ಆದೇಶಿಸುತ್ತದೆಯೇ?*

ಶ್ರೀ ಸಿದ್ದರಾಮಯ್ಯ (ಉಪಮುಖ್ಯ ಮಂತ್ರಿಗಳು) :

ಅ) ಹೌದು.